# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ) ರವರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು – 560 002.

ಸಂಖ್ಯೆ: BBMP/Addl.Dir/ JDNORTH/LP/0214/2014-15 ದಿನಾಂಕ: 05–08–2016

## ಪ್ರಾರಂಭಿಕ ಪ್ರಮಾಣಪತ್ರ

ವಿಷಯ: ಆಸ್ತಿ ಸಂಖ್ಯೆ 92/1/1, ಸರ್ವೆ ನಂ. 1/1, ಥಣಿಸಂದ್ರ ಗ್ರಾಮ, ಕೆ.ಆರ್.ಪುರಂ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು, ವಾರ್ಡ್ ನಂ. 06, ಯಲಹಂಕ ವಲಯ, ಬೆಂಗಳೂರು, ಇಲ್ಲಿರುವ ಸ್ವತ್ತಿನಲ್ಲಿ ನಿರ್ಮಿಸುತ್ತಿರುವ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಬಗ್ಗೆ.

ಉಲ್ಲೇಖ: 1) ನಕ್ಷೆ ಮಂಜೂರಾತಿ ಸಂಖ್ಯೆ: BBMP/Addl.Dir/ JDNORTH/0214/2014-15 ದಿನಾಂಕ: 22–04–2015

2) ತಮ್ಮ ಮನವಿ ಪತ್ರ ದಿನಾಂಕ: 23–03–2016

* * * * * * *

ಆಸ್ತಿ ಸಂಖ್ಯೆ. 92/1/1, ಸರ್ವೆ ನಂ. 1/1, ಥಣಿಸಂದ್ರ ಗ್ರಾಮ, ಕೆ.ಆರ್.ಪುರಂ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು, ವಾರ್ಡ್ ನಂ. 06, ಯಲಹಂಕ ವಲಯ, ಬೆಂಗಳೂರು ಇಲ್ಲಿ ತಳ + ನೆಲ + ಮೇಲಿನ 9 ಅಂತಸ್ತುಗಳ 81 ಘಟಕಗಳುಳ್ಳ ವಸತಿ ಸಮುಚ್ಚಯ ಕಟ್ಟಡ ನಿರ್ಮಿಸಲು ಉಲ್ಲೇಖ (1) ರಂತೆ ಈ ಕಛೇರಿಯಿಂದ ದಿನಾಂಕ: 22–04–2015 ರಂದು ನಕ್ಷೆ ಮಂಜೂರಾತಿಯನ್ನು ನೀಡಲಾಗಿರುತ್ತದೆ ಸದರಿ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡಲು ಉಲ್ಲೇಖ (2) ರಲ್ಲಿ ಕೋರಿರುವುದಕ್ಕೆ ಸಂಬಂಧಿಸಿದಂತೆ ಕಟ್ಟಡ ನಿರ್ಮಾಣದ ಸ್ಥಳವನ್ನು ಪರಿಶೀಲಿಸಲಾಗಿ, ಮಂಜೂರಾತಿ ನಕ್ಷೆಯನ್ವಯ ಕಟ್ಟಡ ನಿರ್ಮಾಣ ಪ್ರಾರಂಭಿಸಿದ್ದು, ಆರ್.ಸಿ.ಸಿ. ಸ್ಥಂಭಗಳನ್ನು ನಿರ್ಮಿಸಿರುವುದನ್ನು ಪರಿವೀಕ್ಷಿಸಲಾಗಿದೆ.

ಅಪರ ನಿರ್ದೇಶಕರು (ನಗರ ಯೋಜನೆ) ರವರು ಪ್ರಾರಂಭಿಕ ಪ್ರಮಾಣಪತ್ರ ನೀಡುವ ಪ್ರಸ್ತಾವನೆಗೆ ದಿನಾಂಕ: 01–08–2016 ರಂದು ಅನುಮೋದನೆ ನೀಡಿರುತ್ತಾರೆ. ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರದ ಬಾಬ್ತು ಶುಲ್ಕ ರೂ. 70,000/– ಗಳಿಗೆ ಡಿ.ಡಿಯನ್ನು ಸಲ್ಲಿಸಿ ಈ ಕಛೇರಿಯ ರಶೀದಿ ಸಂಖ್ಯೆ: RE-ifms331-TP/000201 ದಿನಾಂಕ: 04–08–2016 ರಂದು ಸಂದಾಯ ಮಾಡಿರುವುದರಿಂದ, ಸದರಿ ವಸತಿ ಸಮುಚ್ಚಯ ಕಟ್ಟಡಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ನೀಡಲಾಗಿದೆ.

**ಷರತ್ತುಗಳು**

1. ಕಟ್ಟಡದ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2. ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ–ಪಕ್ಕದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ, ಅಪಘಾತ ಆಗದಂತೆ ಕಟ್ಟಡ ನಿರ್ಮಾಣ ಕೈಗೊಳ್ಳುವುದು ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.
3. ನಕ್ಷೆ ಮಂಜೂರಾತಿಯ ಸಿಂಧುತ್ವವು ಉಲ್ಲೇಖ (1) ರಂತೆ ಅನುಮೋದನೆ ನೀಡಿದ ದಿನಾಂಕದಿಂದ 5 ವರ್ಷಗಳ ಅವಧಿಗೆ ಮಾನ್ಯತೆ ಹೊಂದಿದ್ದು, ಈ ಅವಧಿಯೊಳಗೆ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣಪತ್ರವನ್ನು ಪಡೆಯತಕ್ಕದ್ದು.
4. ಉದ್ಯಾನವನ ಹಾಗೂ ಬಯಲು ಜಾಗಕ್ಕೆ ಸ್ಥಳ ಕಾಯ್ದಿರಿಸದೇ ಇರುವುದರಿಂದ, ಅಷ್ಟೇ ವಿಸ್ತೀರ್ಣದ ಮಾರುಕಟ್ಟೆ ಬೆಲೆಯನ್ನು ಪಾಲಿಕೆಗೆ ಪಾವತಿಸುವ ಸಂಬಂಧ ಘನ ಉಚ್ಚ ನ್ಯಾಯಾಲಯದಲ್ಲಿನ ರಿಟ್ ಅರ್ಜಿ ಸಂಖ್ಯೆ: 8812/2015 (ಎಲ್‌ಬಿ–ಬಿಎಂಪಿ) ರಂತೆ ದಿನಾಂಕ: 30–03–2015 ರಂದು ತಡೆಯಾಜ್ಞೆ ನೀಡಿರುವುದರಿಂದ, ನ್ಯಾಯಾಲಯದ ಅಂತಿಮ ತೀರ್ಪಿಗೆ ಬದ್ಧರಿರುವುದಾಗಿ ದಿನಾಂಕ: 05–08–2016 ರಂದು ಸಲ್ಲಿಸಿರುವ ಮುಚ್ಚಳಿಕೆ ಪತ್ರದಲ್ಲಿನ ಅಂಶಗಳಿಗೆ ಬದ್ಧರಿರತಕ್ಕದ್ದು.

.....2

5. ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಇಂಜಿನಿಯರಿಂಗ್ ಉಪ–ವಿಭಾಗಕ್ಕೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.

05/08/16

ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

05/08/16 5/8/16 05/8/16

ಗೆ,
ಮೆ: ಆರ್.ಎಂ.ಇನ್‌ಫ್ರಾ ನ ಪರವಾಗಿ ಪಾಲುದಾರರಾದ,
ಶ್ರೀ ಆರ್.ಮಹೇಶ್,
# 3, 4ನೇ ಅಡ್ಡರಸ್ತೆ, ವಿದ್ಯಾನಗರ,
ಥಣಿಸಂದ್ರ, ರೈಲ್ವೇ ಬ್ರಿಡ್ಜ್ ಹತ್ತಿರ,
ಬೆಂಗಳೂರು -- 560 077.